[redacted]

ಲೋಕಸಭಾ ಚುನಾವಣೆ: ಬಿಗಿ ಬಂದೋಬಸ್ತ್

ಸುಗಮ-ಶಾಂತಿಯುತ ಮತದಾನಕ್ಕೆ ಸಕಲ ಸಿದ್ದತೆ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ, ಮೇ.: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೇ.07 ರಂದು ನಡೆಯಲಿದ್ದು, ಸುಗಮ ಮತ್ತು ಶಾಂತಿಯುತ ಮತದಾನ ನಡೆಸಲು ಎಲ್ಲ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರವಿವಾರ (ಮೇ.05) ನಡೆದ ಪತ್ರಿಕಾಗೋಷ್ಠಿಯಲ್ಲಿ ಮೆ.07 ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಸಿದ್ಧತೆ ಕುರಿತು ಮಾಹಿತಿ ನೀಡಿದರು.

02-ಬೆಳಗಾವಿ ಲೋಕಸಭಾ ಮತಕ್ಷೇತ್ರದಲ್ಲಿ 957559 ಪುರುಷ ಮತದಾರರು, 966134 ಮಹಿಳೆಯರು, 95 ಇತರೆ ಸೇರಿದಂತೆ 1923788 ಮತದಾರರಿದ್ದಾರೆ. ಅದೇ ರೀತಿಯಲ್ಲಿ 01-ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ 885200 ಪುರಷರು, 876414 ಮಹಿಳೆಯರು ಹಾಗೂ 80 ಇತರೆ ಮತದಾರರು ಸೇರಿದಂತೆ ಒಟ್ಟು 1761694 ಮತದಾರರಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ 2055870 ಪುರುಷ ಮತದಾರರು, 2049169 ಮಹಿಳಾ ಮತದಾರರು ಹಾಗೂ 186 ಇತರೆ ಮತದಾರರು ಸೇರಿದಂತೆ ಒಟ್ಟು 4105225 ಮತದಾರರಿದ್ದಾರೆ.

ಭಾರತ ಚುನಾವಣಾ ಆಯೋಗದ ಅನುಮೋದಿಸಿರುವಂತೆ ಮತದಾರರು ತಮ್ಮ ಮತ ಚಲಾಯಿಸುವ ಮೊದಲು ಮತದಾನ ಕೇಂದ್ರಗಳಲ್ಲಿ ಅವರ ಗುರುತಿಗಾಗಿ ಮತದಾರರ ಗುರುತಿಸಿ ಚೀಟಿ ತೋರಿಸಿ ಮತದಾನ ಮಾಡಬಹುದಾಗಿದೆ. ಮತದಾನದ ದಿನದಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮತದಾನ ನಡೆಯಲಿದೆ.

ಮತದಾನದ ದಿನದಂದು ರಜೆಯ ಘೋಷಣೆ/ಪಾವತಿಸಿದ ರಜೆ:

ಲೋಕಸಭಾ ಕ್ಷೇತ್ರಗಳ ಅಡಿಯಲ್ಲಿ ಬರುವ ಎಲ್ಲಾ ಸರ್ಕಾರಿ ಕಚೇರಿಗಳು, ಶಾಲೆಗಳು ಮತ್ತು ಕಾಲೇಜುಗಳು (ಅನುದಾನತ ಶಿಕ್ಷಣ ಸಂಸ್ಥೆಗಳು ಸೇರಿದಂತೆ) ಮತ್ತು ಸಾರ್ವಜನಕ ವಲಯದ ಉದ್ಯಮಗಳಿಗೆ ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಈ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ, ವ್ಯಾಪಾರ ಉದ್ಯಮಗಳು ಕೈಗಾರಿಕೆಗಳು ಮತ್ತು ಇತರ ಸಂಸ್ಥೆಗಳಲ್ಲಿ ಕೆಲಸ ಮಾಡುವ ಅಧಿಕಾರಿ/ಸಿಬ್ಬಂದಿಗಳು ಅಥವಾ ದಿನಗೂಲಿ ವೇತನದಲ್ಲಿ ಕೆಲಸ ಮಾಡುವ ಮತದಾರರು ತಮ್ಮ ಮತ ಚಲಾಯಿಸಲು ಅನುವು ಮಾಡಿಕೊಡಲು ಆರ್‌ಪಿ ಕಾಯ್ದೆ 1951 ರ ಸೆಕ್ಷನ್ 135 ಬಿ ಪ್ರಕಾರ ಪಾವತಿಸಿದ ರಜೆಯನ್ನು ಮಂಜೂರು ಮಾಡಲು ಆದೇಶಿಸಿದೆ.

ಕಾನೂನುಬಾಹಿರ ಸಭೆಗಳನ್ನು ನಷೇಧಿಸಲಾಗಿದೆ ಮತ್ತು ಮತದಾನದ ಮುಕ್ತಾಯಕ್ಕೆ ನಿಗದಿಪಡಿಸಿದ ಗಂಟೆಯೊಂದಿಗೆ ಕೊನೆಗೊಳ್ಳುವ ಮುಂಚಿನ 48 ಗಂಟೆಗಳ ಅವಧಿಯಲ್ಲಿ ಸಾರ್ವಜನಕ ಸಭೆಗಳನ್ನು ನಡೆಸುವುದನ್ನು ನಷೇಧಿಸುವ ಬಗ್ಗೆ ಆದೇಶಗಳನ್ನು ನೀಡಲಾಗಿದೆ. ಇದು ಚುನಾವಣೆ ನಡೆಯುವ ಪ್ರದೇಶ/ ಸಂಪೂರ್ಣ ಕ್ಷೇತ್ರಕ, ಅನ್ವಯಿಸುತ್ತದೆ.

ಮದ್ಯಪಾನ ಮಾರಾಟವನ್ನು ನಷೇಧಿಸಿ ಆದೇಶ ಹೊರಡಿಸಲಾಗಿದೆ. ರಾಜಕೀಯ ಪ್ರಚಾರಕ್ಕಾಗಿ ಮತದಾನದ ಮುಕ್ತಾಯದ ಸಮಯದೊಂದಿಗೆ ಕೊನೆಗೊಳ್ಳುವ ಮುಂಚಿನ 48 ಗಂಟೆಗಳ ಅವಧಿಯಲ್ಲಿ ಯಾವುದೇ ಧ್ವನವರ್ಧಕವನ್ನು ಬಳಸಲು ನರ್ಬಂಧಿಸಲಾಗಿದೆ.

ಲೋಕಸಭಾ ಕ್ಷೇತ್ರಗಳಿಗೆ ಸಾರ್ವತ್ರಿಕ ಚುನಾವಣೆಯ ಪ್ರಚಾರದ ಸಂದರ್ಭದಲ್ಲಿ ಪ್ರಚಾರದ ಅವಧಿ ಮುಗಿದ ನಂತರ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಪ್ರಚಾರ ನಡೆಸುವಂತಿಲ್ಲ, ಕ್ಷೇತ್ರದ ಹೊರಗಿನಿಂದ ಕರೆತಂದಿರುವ ರಾಜಕೀಯ ಕಾರ್ಯಕರ್ತರು/ ಪಕ್ಷದ ಕಾರ್ಯಕರ್ತರು/ ಮೆರವಣಿಗೆ/ ಪದಾಧಿಕಾರಿಗಳು/ ಪ್ರಚಾರ-ಕಾರ್ಯಕರ್ತರು ಮುಂತಾದವರು ಸೇರಿದಂತೆ ಆ ಕ್ಷೇತ್ರದ ಮತದಾರರಲ್ಲದ ರಾಜಕೀಯ ವ್ಯಕ್ತಿಗಳು ಕ್ಷೇತ್ರವನ್ನು ತೊರೆಯಬೇಕು.

ಆಯೋಗದ ನಿರ್ದೇಶನಗಳ ಪ್ರಕಾರ; ಮೇಲಿನ ಸೂಚನೆಗಳನ್ನು ಕೈಗೊಳ್ಳಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಲು, ಚುನಾವಣಾ ಆಡಳಿತ/ ಪೊಲೀಸ್ ಆಡಳಿತವು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬಹುದಾಗಿದೆ.

ಕಲ್ಯಾಣ ಮಂಟಪಗಳು / ಸಮುದಾಯ ಭವನಗಳು ಇತ್ಯಾದಿಗಳನ್ನು ಪರಿಶೀಲಿಸುವುದು, ಈ ಆವರಣದಲ್ಲಿ ಯಾರಾದರೂ ಹೊರಗಿನವರಿಗೆ ವಸತಿ ಕಲ್ಪಿಸಲಾಗಿದೆಯೇ ಎಂದು ಪರಿಶೀಲಿಸಲು ಸೂಚಿಸಲಾಗಿದೆ. ಕ್ಷೇತ್ರದ ಗಡಿಗಳಲ್ಲಿ ಚೆಕ್ ಪೋಸ್ಟಗಳನ್ನು ಸ್ಥಾಪಿಸಿ ಕ್ಷೇತ್ರದ ಹೊರಗಿನಿಂದ ಬರುವ ವಾಹನಗಳ ಚಲನವಲನದ ನಿಗಾವಹಿಸಲಾಗಿದೆ.

ಆಯಾ ಕ್ಷೇತ್ರದ ಮತದಾರರೇ ಅಥವಾ ಇಲ್ಲವೇ ಎಂಬುದನ್ನು ಕಂಡುಹಿಡಿಯಲು ಅವರ ಗುರುತಿನ ಚೀಟಿಗಳನ್ನು ಪರಿಶೀಲಿಸಲಾಗುತ್ತಿದೆ.

ಮುದ್ರಣ ಅಥವಾ ವಿದ್ಯುನ್ಮಾನ ಮಾಧ್ಯಮ ಸೇರಿದಂತೆ ಯಾವುದೇ ಮಾಧ್ಯಮಗಳಲ್ಲಿ ಚುನಾವಣಾ ಸಮೀಕ್ಷೆಗಳು ಸೇರಿದಂತೆ ಮತದಾರರ ಮೇಲೆ ಪ್ರಭಾವ ಬೀರುವ ಯಾವುದೇ ರೀತಿಯ ಸಮೀಕ್ಷೆಗಳನ್ನು ಮಾಡಬಾರದು ಎಂದು ಮುದ್ರಣ, ವಿದ್ಯುನ್ಮಾನ ಮಾಧ್ಯಮಗಳಿಗೆ ತಿಳಿಸಲಾಗಿದೆ.

ಚುನಾವಣೆ ಕುರಿತು ಜನಾಭಿಪ್ರಾಯ ಸಂಗ್ರಹ, ಫಲಿತಾಂಶಗಳು ಅಥವಾ ಯಾವುದೇ ಇತರೆ ರೀತಿಯ ಸಮೀಕ್ಷೆಯ ಫಲಿತಾಂಶಗಳು ಸೇರಿದಂತೆ ಯಾವುದೇ ಚುನಾವಣಾ ವಿಷಯವನ್ನು ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರದರ್ಶಿಸುವುದು/ಪ್ರಕಟಿಸುವುದನ್ನು ದೇಶದಲ್ಲಿ ನಡೆಯುತ್ತಿರುವ ಒಟ್ಟು 7 ಹಂತಗಳ ಮತದಾನ ಮುಗಿಯುವವರೆಗೆ ನಷೇಧಿಸಲಾಗಿದೆ.

ಮತಗಟ್ಟೆಗಳಲ್ಲಿ ಬಿಸಿಲಿನ ತಾಪವನ್ನು ನೀಗಿಸಲು ಮತದಾರರಿಗೆ ಅನುಕೂಲವಾಗುವಂತೆ ಕ್ರಮ;

ಮತಗಟ್ಟೆಗಳಲ್ಲಿ ಕುಡಿಯುವ ನೀರು, ವಿದ್ಯುತ್, ಪೀಠೋಪಕರಣಗಳು ಪುರುಷರು ಮತ್ತು ಮಹಿಳೆಯರಿಗಾಗಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ಮತದಾರರಿಗೆ ಸಹಾಯವಾಗಲು ಸಂಕೇತ ಫಲಕಗಳನ್ನು ಅಳವಡಿಸಲಾಗಿದೆ. ಮತಗಟ್ಟೆಯ ಅಕ್ಕಪಕ್ಕದ ಕೊಠಡಿಗಳನ್ನು ವಿಶ್ರಾಂತಿ ಕೊಠಡಿಗಳನ್ನಾಗಿ ಸಿದ್ಧವಿರಿಸಲಾಗಿದೆ. ಮತಗಟ್ಟೆ ಆವರಣದಲ್ಲಿ ಶೂಶ್ರೂಷಕರು/ಆಶಾ ಕಾರ್ಯಕರ್ತರೊಂದಿಗೆ ವೈದ್ಯಕೀಯ ಕಿಟ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ತುರ್ತು ಸಂದರ್ಭಗಳಲ್ಲಿ ಆಂಬ್ಯುಲೆನ್ಸ್ ಸೇವೆಯ ಸೌಲಭ್ಯವಿರುತ್ತದೆ.

ಮುದ್ರಣ ಮಾಧ್ಯಮಕ್ಕಾಗಿ ರಾಜಕೀಯ ಜಾಹೀರಾತಿನ ಪೂರ್ವ-ಪ್ರಮಾಣೀಕರಣ:

ರಾಜ್ಯ ಮಟ್ಟದಲ್ಲಿ ಪಕ್ಷಗಳು/ಜಿಲ್ಲಾ ಮಟ್ಟದಲ್ಲಿ ಅಭ್ಯರ್ಥಿಗಳು ಆಯಾ ಎಂಸಿಎಂಸಿ ಸಮಿತಿಯ ಪೂರ್ವ ಪಮಾಣೀಕರಣವಿಲ್ಲದೆ ಮತದಾನದ ದಿನ ಮತ್ತು ಚುನಾವಣಾ ಪೂರ್ವ ದಿನದಂದು ಮುದ್ರಣ ಮಾಧ್ಯಮದಲ್ಲಿ ಯಾವುದೇ ರಾಜಕೀಯ ಜಾಹೀರಾತುಗಳನ್ನು ಪ್ರಕಟಿಸುವುದನ್ನು ಭಾರತ ಚುನಾವಣಾ ಆಯೋಗ ನರ್ಬಂಧಿಸಿದೆ ಎಂದು ತಿಳಿಸಿದರು.

ಮತದಾನ ಕೇಂದ್ರದಿಂದ 200 ಮೀಟರ್ ವ್ಯಾಪ್ತಿಯೊಳಗೆ ಯಾವುದೇ ಚುನಾವಣಾ ಬೂತ್‌ಗಳನ್ನು ಸ್ಥಾಪಿಸಿದಂತೆ ಸೂಚನೆ ನೀಡಲಾಗಿದೆ. ಒಂದೇ ಕಟ್ಟಡ/ ಸ್ಥಳ ಅಥವಾ ಆವರಣದಲ್ಲಿ ಒಂದಕ್ಕಿಂತ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಿದ್ದರೂ ಸಹ, ಅಂತಹ ಆವರಣದಿಂದ 200 ಮೀಟರ್‌ಗಳಷ್ಟು ದೂರದಲ್ಲಿ ಅಭ್ಯರ್ಥಿಗಳು ತಮ್ಮ ಪಕ್ಷಗಳ ತಾತ್ಕಾಲಿಕ ಕಚೇರಿಗಳನ್ನು ತೆರೆಯಲು ಅವಕಾಶವಿದೆ.

ಮತದಾನ ಕೇಂದ್ರದ ಆವರಣದ 200 ಮೀಟರ್ ಹೊರಗಿನ ಜಾಗದಲ್ಲಿ ನೆರಳಿಗಾಗಿ ತಾತ್ಕಾಲಿಕ ಟೆಂಟ್ ಹಾಕಿಕೊಳ್ಳಬಹುದಾಗಿದೆ. ಪ್ರತಿ ಬೂತ್‌ಗಳಲ್ಲಿ ಕೇವಲ ಒಂದು ಟೇಬಲ್ ಮತ್ತು ಎರಡು ಕುರ್ಚಿಗಳನ್ನು ಮಾತ್ರ ಹಾಕಲು ಅವಕಾಶವಿದೆ. ಮತದಾನದ ದಿನಾಂಕದಂದು ಮತಗಟ್ಟೆಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಯಾವುದೇ ಚುನಾವಣಾ ಪ್ರಚಾರವನ್ನು ನರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ನತೇಶ್ ಪಾಟೀಲ ಅವರು ತಿಳಿಸಿದರು.

ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಡಿಸಿಪಿ ರೋಹನ್ ಜಗದೀಶ್, ಪ್ರೊಬೇಷನರಿ ಐಎಎಸ್ ಅಧಿಕಾರಿ ಶುಭಂ ಶುಕ್ಲಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ಬಸ್ ಸಾರಿಗೆ ಸಂಸ್ಥೆಯ ನೌಕರರಿಂದ ಮಾನವ ಸರಪಳಿ ಕೊಪ್ಪಳ ಬಸ್ ಡಿಪೋದಲ್ಲಿ ಲೋಕಸಭಾ ಚುನಾವಣೆ ಸ್ವೀಪ್ ಕಾರ್ಯಕ್ರಮ

ಕೊಪ್ಪಳ ಎಪ್ರಿಲ್ 05 : ಲೋಕಸಭಾ ಸಾರ್ವತ್ರಿಕ ಚುನಾವಣೆ ನಮಿತ್ಯ ಮತದಾನ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ಕೊಪ್ಪಳ ತಾಲೂಕ ಸ್ವೀಪ್ ಸಮಿತಿ ವತಿಯಿಂದ ಕೊಪ್ಪಳ ನಗರದ ಬಸ್ ಡಿಪೋದಲ್ಲಿ ಕಲ್ಯಾಣ ಕರ್ನಾಟಕ ಬಸ್ ಸಾರಿಗೆ ಸಂಸ್ಥೆಯ ನೌಕರರು ಹಾಗು ಸಿಬ್ಬಂದಿಗಳು ಮೇ 04 ರಂದು ಮಾನವ ಸರಪಳಿ ನರ್ಮಿಸುವ ಮೂಲಕ ಮತದಾನ ಜಾಗೃತಿ ಮೂಡಿಸಿದರು. ಕೊಪ್ಪಳ ತಾಲೂಕಿನ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಹನಮಂತಪ್ಪ ಅವರು ಮಾತನಾಡಿ, ಮೇ-7ರಂದು ಜರುಗುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶವನ್ನಾಗಿ ನರ್ಮಿಸಲು ನಾವೆಲ್ಲರೂ ಕೈ ಜೋಡಿಸೋಣ.

ಪ್ರತಿ ಮತ ದೇಶಕ್ಕೆ ಹಿತ ಎನ್ನುವಂತೆ ನಮ್ಮ ಕುಟುಂಬದಲ್ಲಿರುವ 18 ವರ್ಷ ಮೇಲ್ಪಟ್ಟ ಎಲ್ಲರೂ ಸ್ವತಂತ್ರವಾಗಿ ಮತ ಚಲಾಯಿಸಬೇಕು. ಯಾವುದೇ ಆಸೆ-ಆಮೀಳಗಳಿಗೆ ಒಳಗಾಗದೇ ನರ್ಭೀತರಾಗಿ ಮತ ಚಲಾಯಿಸಬೇಕು.

ಬೇಸಿಗೆ ಇರುವುದರಿಂದ ಮುಂಜಾನೆಯ ಅವಧಿಯಲ್ಲಿ ಚುನಾವಣೆ ಆಯೋಗವು ನರ್ದೇಶನ ನೀಡಿರುವ ಅಗತ್ಯ ದಾಖಲಾತಿಯನ್ನು ಮತಗಟ್ಟೆಗೆ ತೆಗೆದುಕೊಂಡು ಹೋಗಿ ನಮ್ಮ ಹಕ್ಕನ್ನು ಚಲಾಯಿಸಿರಿ. ಅವಿದ್ಯಾವಂತರಿಗಿಂತ ವಿದ್ಯಾವಂತ ವರ್ಗವೇ ಮತದಾನದಿಂದ ದೂರ ಉಳಿಯುತ್ತಾರೆ ಎಂಬ ಅಪವಾದ ಇದೆ.

ಇದನ್ನು ತೆಗೆದುಹಾಕಿ ಮೇ 7 ರಂದು ಕೇವಲ ಐದು ನಮಿಳ ಮತಗಟ್ಟೆಗೆ ಬಂದು ನರ್ಭೀತಿಯಿಂದ, ಪ್ರಾಮಾಣಿಕವಾಗಿ ಮತ ಚಲಾಯಿಸೋಣ ಎಂದರು.ದೇಶದ ಅಭಿವೃದ್ಧಿಯಲ್ಲಿ ಸಹಭಾಗಿತ್ವಕ್ಕಾಗಿ ಮತದಾನ ಪ್ರಜಾಪ್ರಭುತ್ವದ ಮೂಲಭೂತ ಹಕ್ಕು. ಪ್ರಜಾಪ್ರಭುತ್ವವನ್ನು ಉಳಿಸಿ, ಬೆಳೆಸಿ ಗಟ್ಟಿಗೊಳಿಸಲು ಪ್ರಜೆಗಳ ಪ್ರತ್ಯಕ್ಷ ಪಾಲ್ಗೊಳ್ಳುವಿಕೆ ನರಂತರವಾಗಿ ಇರಬೇಕು.

ಚುನಾವಣೆ ನಡೆದಾಗ ಮತಗಟ್ಟೆಗೆ ಬಂದು ಮತದಾನ ಮಾಡುವುದು ಅದರಲ್ಲಿ ಕಣ್ಣಿಗೆ ಕಾಣುವ ಒಂದು ಸಣ್ಣ ಸಂಕೇತ ಇದರ ಪರಿಣಾಮ ಮಾತ್ರ ಬಹಳ ದೊಡ್ಡದು ಎಂದರು.

ನಂತರ ಕಡ್ಡಾಯ ಮತದಾನ ಮಾಡಲು ಎಲ್ಲಾ ನೌಕರರು, ಕಾರ್ಮಿಕರಿಗೆ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

ಸ್ವೀಪ್ ಕಾರ್ಯಕ್ರಮದಲ್ಲಿ ಡಿಪೋ ಮ್ಯಾನೇಜರ್ ಬಸವರಾಜ ಬಟ್ಟೂರ, ತಾಲೂಕ ಪಂಚಾಯತ್ ಸಹಾಯಕ ನರ್ದೇಶಕ ಮಹೇಶ್, ತಾಲೂಕ ಯೋಜನಾಧಿಕಾರಿ ರಾಜೇಸಾಬ್ ನದಾಫ್, ಜಿಲ್ಲಾ ಐಇಸಿ ಸಂಯೋಜಕ ಶ್ರೀನವಾಸ್ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ತಾಲೂಕ ಸ್ವೀಪ್ ಸಮಿತಿ ಸದಸ್ಯರಾದ ಬಸವರಾಜ ಬಳಿಗಾರ, ವಿರೇಶ್ ಬಡಿಗೇರ, ತಾ.ಪಂ ಸಿಬ್ಬಂದಿಗಳಾದ ಗಿರೀಶ್, ನಾಗರಾಜ ಚಿಲವಾಡಗಿ, ಬಸ್ ಸಾರಿಗೆ ಸಿಬ್ಬಂದಿಗಳಾದ ಚಾಲಕರು, ನರ್ವಾಹಕರು, ತಾಂತ್ರಿಕ ವಿಭಾಗದ ಸಿಬ್ಬಂದಿಗಳು ಸೇರಿದಂತೆ 65 ಕ್ಕೂ ಹೆಚ್ಚು ನೌಕರರು ಭಾಗವಹಿಸಿದ್ದರು.

ಮುಕ್ತ-ನ್ಯಾಯಸಮ್ಮತ ಚುನಾವಣೆಗೆ ಜಿಲ್ಲಾಡಳಿತ ಸನ್ನದ್ಧ : ಮೇ.07ರಂದು ಮತದಾನ ವಿಜಯಪುರ ಲೋಕಸಭಾ ಕ್ಷೇತ್ರದಲ್ಲಿ 19,46,090 ಮತದಾರರು-2086 ಮತಗಟ್ಟೆಗಳ ಸ್ಥಾಪನೆ

ವಿಜಯಪುರ, ಮೇ.05-: ಮುಕ್ತ ನ್ಯಾಯಸಮ್ಮತ ಹಾಗೂ ಸುಗಮ ಚುನಾವಣೆಗೆ ಜಿಲ್ಲಾಡಳಿತದ ವತಿಯಿಂದ ಸಕಲಸಿದ್ಧತೆಗಳನ್ನುಮಾಡಿಕೊಳ್ಳಲಾಗಿದ್ದು, ಮೇ.07ರಂದು ಬೆಳಿಗ್ಗೆ 7ರಿಂದ ಸಂಜೆ 6ರವರೆಗೆ ನಡೆಯಲಿರುವ ಮತದಾನಕ್ಕೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದ್ದು, ವಿಜಯಪುರ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 19,46,090 ಮತದಾರರಿದ್ದು,ಜಿಲ್ಲೆಯಾದ್ಯಂತ ಒಟ್ಟು 2086 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆಜಿಲ್ಲಾಚುನಾವಣಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಇದೇ ಮೇ.7 ರಂದು ನಡೆಯುವ ಮತದಾನ ಹಾಗೂ ಜೂನ್. 4 ರಂದು ನಡೆಯುವ ಮತ ಎಣಿಕೆ ಕಾರ್ಯಕ್ಕೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.ಮತದಾರರ ವಿವರ : ಜಿಲ್ಲೆಯಲ್ಲಿ 9,87,974 ಗಂಡು, 9,57,906 ಹೆಣ್ಣು ಹಾಗೂ 210 ಇತರೆ ಮತದಾರರು ಸೇರಿದಂತೆ ಒಟ್ಟು 19,46,090 ಮತದಾರರಿದ್ದಾರೆ. 85 ವರ್ಷಕ್ಕಿಂತ ಮೇಲ್ಪಟ್ಟು ಒಟ್ಟು 2357 ಮತದಾರರ ಪೈಕಿ 2170 ಮತದಾರರು ತಮ್ಮ ಮನೆಯಿಂದ ಮತ ಚಲಾಯಿಸಿದ್ದು, ಶೇ.92.06 ರಷ್ಟು ಮತದಾನವಾಗಿದೆ. ಅದರಂತೆ ಶೇ.40ಕ್ಕಿಂತ ಹೆಚ್ಚಿನ ದಿವ್ಯಾಂಗವಿರುವ (ಪಿಡಬ್ಲೂಡಿ) ಒಟ್ಟು 886 ಮತದಾರರ ಪೈಕಿ 854 ಮತದಾರರು ಮತ ಚಲಾಯಿಸುವ ಮೂಲಕ ಶೇ.96.38ರಷ್ಟುಮತದಾನವಾಗಿದೆ.

ಮತಗಟ್ಟೆಗಳ ವಿವರ : ವಿಜಯಪುರ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲೆಯಾದ್ಯಂತ ಒಟ್ಟು 2086 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ಪ್ರತಿ ವಿಧಾನಸಭಾವಾರು 05 ಸಖಿ ಮತಗಟ್ಟೆ, 08 ದಿವ್ಯಾಂಗ ಮತಗಟ್ಟೆ, 08 ಯುವ ಮತಗಟ್ಟೆ08ಧ್ಯೇಯಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಜಿಲ್ಲೆಯಾದ್ಯಂತ 171 ಸೂಕ್ಷ್ಮ ಹಾಗೂ 41 ಅತಿ ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಮೈಕ್ರೋ ಆಬ್ಜರ್ವರ್ ನೇಮಿಸಿದ್ದು, ವೆಬ್‌ಕಾಸ್ಟಿಂಗ್ ಮೂಲಕ ನಿಗಾ ಇಡಲಾಗುತ್ತಿದೆ. ಜಿಲ್ಲೆಯ ಎಲ್ಲ ಮತಗಟ್ಟೆಗಳಲ್ಲಿ ಕನಿಷ್ಠ ಸೌಲಭ್ಯಗಳಾದ ರ್‍ಯಾಂಪ್ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ, ಪೀಠೋಪಕರಣ,ಮಹಿಳೆಯರು ಹಾಗೂ ಪುರುಷರಿಗೆ ಪ್ರತ್ಯೇಕ ಶೌಚಾಲಯ, ವಿಶ್ರಾಂತಿ ಕೊಠಡಿ, ಆಸನ ವ್ಯವಸ್ಥೆ, ತುರ್ತು ಸಂದರ್ಭದಲ್ಲಿ ಅಂಬುಲೆನ್ಸ್ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

ವಿದ್ಯುನ್ಮಾನ ಮತಯಂತ್ರಗಳ ವಿವರ : ಚುನಾವಣೆಗಾಗಿ 2617 ಬಿ.ಯು, 2616 ಸಿ.ಯು, 2773 ವಿವಿಪ್ಯಾಟ್‌ಗಳನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ.

ಚುನಾವಣೆ ನಂತರ ಮತ ಯಂತ್ರಗಳನ್ನು ಭದ್ರತೆಯಲ್ಲಿ ಇರಿಸಲು ವಿಧಾನಸಭಾವಾರು ಮತ್ರಯಂತ್ರಗಳನ್ನು ಇರಿಸಲು ಸೈನಿಕಶಾಲೆಯಲ್ಲಿ ಭದ್ರತಾ ಕೊಠಡಿಗಳನ್ನುಸ್ಥಾಪಿಸಲಾಗಿದ್ದು, ವಿಧಾನಸಭಾವಾರು ವಿವರದಂತೆ ಮುದ್ದೇಬಿಹಾಳ ಹಾಗೂ ದೇವರಹಿಪ್ಪರಗಿ ವಿಧಾನಸಭಾ ಮತಕ್ಷೇತ್ರದಮತಯಂತ್ರಗಳನ್ನು ಸೈನಿಕ ಶಾಲೆಯ ಒಡೆಯರ ಸದನದಲ್ಲಿ, ಬಸವನಬಾಗೇವಾಡಿ ಹಾಗೂ ಬಬಲೇಶ್ವರ ಮತಕ್ಷೇತ್ರದಮತಯಂತ್ರಗಳನ್ನು ಆದಿಲ್‌ಶಾಹಿ ಸದನದಲ್ಲಿ, ವಿಜಯಪುರ ನಗರ ಹಾಗೂ ನಾಗಠಾಣ ಮತಕ್ಷೇತ್ರದ ಮತಯಂತ್ರಗಳನ್ನು ಹೊಯ್ಸಳ ಸದನದಲ್ಲಿ, ಇಂಡಿ ಹಾಗೂ ಸಿಂದಗಿಮತಕ್ಷೇತ್ರದಮತಯಂತ್ರಗಳನ್ನು ವಿಜಯಪುರ ನಗರ ಸದನದಲ್ಲಿ ವ್ಯವಸ್ಥೆ ಮಾಡಲಾಗಿದೆ.

ಚುನಾವಣಾ ಸಿಬ್ಬಂದಿಗಳ ವಿವರ : ಚುನಾವಣಾ ಕರ್ತವ್ಯಕ್ಕೆ 2527 ಪಿಆರ್‌ಓ, 2527 ಎಪಿಆರ್‌ಓ, 5054 ಪಿಓ, 184 ಮೈಕ್ರೋ ಆಬ್ಜರ್ವರ್‌ಗಳನ್ನು ನಿಯೋಜಿಸಲಾಗಿದೆ.

ನಿಯೋಜಿತ ಸಿಬ್ಬಂದಿಗಳಿಗೆ ಪ್ರತಿ ಮತಗಟ್ಟೆಗಳಿಗೆ ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತೆಯರನ್ನು ಅವಶ್ಯಕ ಔಷಧೋಪಚಾರದೊಂದಿಗೆ ನಿಯೋಜಿಸಲಾಗಿದೆ.

ಚುನಾವಣೆಗೆ ನಿಯೋಜಿಸಿ ಸಿಬ್ಬಂದಿಗಳಿಗೆ ಆಯಾ ಮತಗಟ್ಟೆಗಳಲ್ಲಿ ಹಾಗೂ ಆಯಾ ಮಸ್ಟರಿಂಗ್ ಡಿ ಮಸ್ಟರಿಂಗ್ ಕೇಂದ್ರಗಳಲ್ಲಿ ಊಟೋಪಚಾರ ವ್ಯವಸ್ಥೆ ಮಾಡಲಾಗಿದೆ.

ನಿಯೋಜಿತ ಸಿಬ್ಬಂದಿಗಳಿಗೆ 241 ಬಸ್ಸು, 124 ಕ್ರೂಸರ್ ಸೇರಿದಂತೆ ಒಟ್ಟು 365 ವಾಹನಗಳ ವ್ಯವಸ್ಥೆ ಮಾಡಲಾಗಿದೆ. ನಿಯೋಜಿತ ಮತಗಟ್ಟೆ ಸಿಬ್ಬಂದಿಗಳ ಮಕ್ಕಳ ಪಾಲನೆ-ಪೋಷಣೆಗಾಗಿ ದಿನಾಂಕ : 06-05-2024 ಮತ್ತು 07-05-2024 ರಂದು ಮಕ್ಕಳನ್ನು ನೋಡಿಕೊಳ್ಳಲು ಮಸ್ಟರಿಂಗ್ ಕೇಂದ್ರಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.ಮೇಲ್ವಿಚಾರಣೆಗಾಗಿ ಜಿಲ್ಲಾಮಕ್ಕಳರಕ್ಷಣಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಮತದಾರ ಸೌಲಭ್ಯ ಕೇಂದ್ರ-ಅಂಚೆ ಮತದಾನ ವಿವರ : ಜಿಲ್ಲೆಯಲ್ಲಿ ಅಗತ್ಯ ಸೇವೆಗಳ ಇಲಾಖೆಯಲ್ಲಿಕಾರ್ಯನಿರ್ವಹಿಸುತ್ತಿರುವ ಹಾಗೂ ವಿಜಯಪುರ ಲೋಕಸಭಾ ಕ್ಷೇತ್ರದ ಮತದಾರರಿರುವ ಬೇರೆ ಜಿಲ್ಲೆಗಳಲ್ಲಿಕಾರ್ಯನಿರ್ವಹಿಸುತ್ತಿರುವ ಅಧಿಕಾರಿ-ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿಗಳಕಾರ್ಯಾಲಯದ ಆವರಣದಲ್ಲಿ ಸ್ಥಾಪಿಸಲಾದ ಮತದಾರರ ಸೌಲಭ್ಯ ಕೇಂದ್ರಗಳಲ್ಲಿ ಹಾಗೂ ಅಂಚೆ ಮತದಾನ ಕೇಂದ್ರಗಳ (ಎಫ್‌ಸಿ &ಪಿವಿಸಿ) ಮೂಲಕ ಮತದಾನ ಮಾಡಲುಅವಕಾಶಕಲ್ಪಿಸಲಾಗಿದ್ದು, ಸದರಿ ಸೌಲಭ್ಯ ಕೇಂದ್ರಗಳಲ್ಲಿ ಅಗತ್ಯ ಸೇವೆಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 1969 ಮತದಾರರ ಪೈಕಿ 654 ಹಾಗೂ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿ ಈ ಜಿಲ್ಲೆಯ ಮತದಾರರು ಹಾಗೂ ಈ ಜಿಲ್ಲೆಯ ಮತದಾರರು ಬೇರೆ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರ ಮತದಾರರು ಒಟ್ಟು 1382ರ ಪೈಕಿ 743 ಮತದಾರರು ಮತ ಚಲಾಯಿಸಿದ್ದಾರೆ.

ಮಾದರಿ ನೀತಿ ಸಂಹಿತೆ : ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘಣೆ ಪ್ರಕರಣಗಳ ಮೇಲೆ ನಿಗಾ ಇಡಲು ರಚಿಸಲಾದ ಪೊಲೀಸ್-ಕ್ಷಿಪ್ರ ಪಡೆಗಳು (ಎಫ್‌ಎಸ್‌ಟಿ) ಸ್ಥಿರ ಕಣ್ಗಾವಲು ತಂಡಗಳು (ಎಸ್‌ಎಸ್‌ಟಿ), ಆದಾಯ ತೆರಿಗೆ ಸೇರಿದಂತೆ ಒಟ್ಟು 378.51 ಲಕ್ಷ ರೂ. ನಗದು, 21.10ಲಕ್ಷ ರೂ.ಮೌಲ್ಯದ 5210.798 ಲೀ. ಮದ್ಯ, 4.05 ಲಕ್ಷ ರೂ. ಮೌಲ್ಯದ 44.832 ಕಿ.ಗ್ರಾಂ. ಮಾದಕ ವಸ್ತುಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ.

ಕುಂದು ಕೊರತೆ ಪರಿಹಾರ : ಮತದಾರರಸಹಾಯವಾಣಿಯಿಂದ ಸ್ವೀಕೃತವಾದ ಒಟ್ಟು 290 ಕರೆಗಳಿಗೆ ಮಾಹಿತಿ ನೀಡಲಾಗಿದೆ. ಹೆಚ್ಚುವರಿಯಾಗಿ ಎನ್.ಜಿ.ಆರ್.ಎಸ್. ಪೋರ್ಟಲ್‌ನಲ್ಲಿ281ದೂರುಗಳನ್ನು ದಾಖಲಿಸಲಾಗಿದ್ದು, ಎಲ್ಲ 281 ದೂರುಗಳನ್ನು ವಿಲೇವಾರಿ ಮಾಡಲಾಗಿದೆ. ನೀತಿ ಸಂಹಿತೆ ಉಲ್ಲಂಘನೆಯ 8 ದೂರುಗಳಿಗೆ ಸಂಬಂಧಿಸಿದಂತೆ 3 ದೂರುಗಳು ವಿಚಾರಣಾ ಹಂತದಲ್ಲಿದ್ದು, ಅಧಿಕಾರಿ-ನೌಕರರ ವಿರುದ್ದ ಸ್ವೀಕೃತವಾದ 38 ದೂರುಗಳ ಪೈಕಿ 36 ದೂರುಗಳನ್ನು ನಿಖಾಲಿ ಮಾಡಲಾಗಿದೆ. ಬಾಕಿ 2 ದೂರುಗಳು ವಿಚಾರಣೆಯಲ್ಲಿವೆ. ಇತರೆ ಚುನಾವಣೆಗೆ ಸಂಬಂಧಿಸಿದ 7 ದೂರುಗಳ ಪೈಕಿ 4 ದೂರುಗಳು ನಿಖಾಲಿಯಾಗಿದ್ದು, 3 ದೂರುಗಳು ವಿಚಾರಣೆ ಹಂತದಲ್ಲಿವೆ. ಸುವಿಧಾ ಅಡಿಯಲ್ಲಿ 250 ಅರ್ಜಿಗಳ ಪೈಕಿ 215 ಅರ್ಜಿ ಅಂಗೀಕರಿಸಲಾಗಿದೆ. 19 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 3 ಅರ್ಜಿಗಳು ಬಾಕಿ ಇವೆ, 13 ಅರ್ಜಿಗಳನ್ನು ರದ್ದುಗೊಳಿಸಲಾಗಿದೆ.

ಕಾನೂನು ಸುವ್ಯವಸ್ಥೆ : ಜಿಲ್ಲೆಯಲ್ಲಿ ಶಾಂತಿಯುತ ಹಾಗೂ ಪಾರದರ್ಶಕ ಮತದಾನಕ್ಕಾಗಿ ಎಲ್ಲ ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು 02 ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು, 8 ಡಿಎಸ್‌ಪಿ, 26 ಸಿಪಿಐ, 95 ಪಿಎಸ್‌ಐ, 121 ಎಎಸ್‌ಐ, 704 ಹೆಚ್.ಸಿ., 1187 ಪಿಸಿ, 945 ಎಚ್‌ಜಿ, 11 ಎಫ್‌ಜಿ ಸೇರಿದಂತೆ 3099 ಜನರು ಸೇರಿದಂತೆ 55 ಸಿಎಪಿಎಫ್ ಹಾಗೂ 5 ಐಆರ್‌ಬಿ-ಕೆಎಸ್‌ಆರ್‌ಪಿ ತುಕಡಿಗಳನ್ನು ನಿಯೋಜಿಸಲಾಗಿದೆ. ಜಿಲ್ಲೆಯಲ್ಲಿ ಲೈಸನ್ಸ್ ಹೊಂದಿರುವ ಒಟ್ಟು 2363 ಆಯುಧಗಳ ಪೈಕಿ 2274 ಜಮಾ ಮಾಡಲಾಗಿದ್ದು, 54 ಆಯುಧಗಳನ್ನು ವಿನಾಯಿತಿ ನೀಡಲಾಗಿದೆ.

ನಿಷೇಧಾಜ್ಞೆ: ಶೂನ್ಯ ಅವಧಿ (ಕೊನೆಯ 48ಗಂಟೆಗಳು)ಯಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸುವುದು ನಿಷೇಧಿಸಲಾಗಿದೆ. 5ಕ್ಕಂತ ಹೆಚ್ಚಿನ ಜನರು ತಿರುಗಾಡುವುದನ್ನು ನಿಷೇಧಿಸಿದೆ. ಮದ್ಯಪಾನ ಮಾರಾಟನಿಷೇಧಿಸಿದೆಧ್ವನಿವರ್ಧಕಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ. ಕ್ಷೇತ್ರದ ಮತದಾರರಲ್ಲದ ರಾಜಕೀಯ ವ್ಯಕ್ತಿಗಳು ಕ್ಷೇತ್ರವನ್ನು ತೊರೆಯುವಂತೆ ತಿಳಿಸಿದೆ.

ಪ್ರಜಾಸತ್ತಾತ್ಮಕ ವಿಧಾನದ ಮೂಲಕ ಸುಭದ್ರವಾದ ಸರ್ಕಾರವನ್ನು ರಚಿಸುವ ಪ್ರಕ್ರಿಯೆಯಲ್ಲಿ ಪ್ರತಿಯೊಂದು ಮತವುಅಮೂಲ್ಯವಾಗಿರುವುದರಿಂದ ಜಿಲ್ಲೆಯ ಅರ್ಹ ಎಲ್ಲ ಮತದಾರರು ಮತದಾನದ ಹಬ್ಬದಲ್ಲಿ ಭಾಗವಹಿಸಿ ತಪ್ಪದೇ ಮತ ಚಲಾಯಿಸುಂತೆ ಅವರು ಮನವಿ ಮಾಡಿಕೊಂಡಿದ್ದಾರೆ.

ಐದು ರಾಷ್ಟ್ರಗಳ ಚುನಾವಣಾ ಆಯೋಗದ ಪ್ರತಿನಿಧಿಗಳ ನಿಯೋಗ ಭೇಟಿ ಲೋಕಸಭಾ ಚುನಾವಣೆ: ಸಿದ್ಧತೆ ಹಾಗೂ ವಿವಿಧ ಹಂತಗಳ ಪ್ರಕ್ರಿಯೆ ವೀಕ್ಷಣೆ

(1 ನೇ ಪುಟದಿಂದ)

ಸಭೆಯಲ್ಲಿ ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಚುನಾವಣಾ ಸಿದ್ಧತೆಗಳ ಕುರಿತು ಮಾಹಿತಿಯನ್ನು ನೀಡಿದರು.

ಬೆಳಗಾವಿ ಉತ್ತರ ವಲಯ ಐಜಿಪಿ ವಿಕಾಸ್ ಕುಮಾರ್ ವಿಕಾಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಐ.ಎ.ಎಸ್. ಪ್ರೊಬೇಷನರಿ ಅಧಿಕಾರಿ ಶುಭಂ ಶುಕ್ಲಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ:ಇದಾದ ಬಳಿಕ 02-ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ನಗರದ ವನಿತಾ ಮಹಾವಿದ್ಯಾಲಯದಲ್ಲಿ ಸ್ಥಾಪಿಸಲಾಗಿರುವ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿದ ನಿಯೋಗದ ಸದಸ್ಯರು, ಮಸ್ಟ ರಿಂಗ್ ಕುರಿತು ಮಾಹಿತಿಯನ್ನು ಪಡೆದುಕೊಂಡರು.

ಮತಗಟ್ಟೆ ಸಿಬ್ಬಂದಿ ನಿಯೋಜನೆ, ಸ್ಟ್ರಾಂಗ್ ರೂಮ್, ಮತಯಂತ್ರಗಳ ವಿತರಣೆ, ಮತಗ್ಟೆಗೆ ಚುನಾವಣಾ ಅಧಿಕಾರಿ/ಸಿಬ್ಬಂದಿ ತಂಡಗಳ ರವಾನೆ ಹಾಗೂ ಸಾರಿಗೆ ವ್ಯವಸ್ಥೆಯ ಬಗ್ಗೆ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಮಾದರಿ ನೀತಿಸಂಹಿತೆ(ಎಂಸಿಸಿ) ಕೇಂದ್ರ ವೀಕ್ಷಣೆ:ಲೋಕಸಭಾ ಚುನಾವಣಾ ಸಂದರ್ಭದಲ್ಲಿ ಮಾದರಿ ನೀತಿಸಂಹಿತೆ(ಎಂಸಿಸಿ) ಪಾಲನೆಯನ್ನು ಖಚಿತಪಡಿಸುವ ಹಿನ್ನೆಲೆಯಲ್ಲಿ ಸ್ಥಾಪಿಸಲಾಗಿರುವ ಎಂಸಿಸಿ ನಿಗಾ ಕೇಂದ್ರಕ್ಕೆ ಅಂತರ್ ರಾಷ್ಟ್ರೀಯ ನಿಯೋಗ ಭೇಟಿ ನೀಡಿತು.

ಚುನಾವಣೆ ಘೋಷಣೆಯಾದ ತಕ್ಷಣವೇ ಮಾದರಿ ನೀತಿಸಂಹಿತೆ ಜಾರಿಗೆ ಬರುತ್ತದೆ. ಮಾದರಿ ನೀತಿಸಂಹಿತೆ ಉಲ್ಲಂಘನೆಗಳನ್ನು ಪತ್ತೆ ಮಾಡಿ ಸೂಕ್ತ ಕ್ರಮ ಕೈಗೊಳ್ಳಲು ಅನುಕೂಲವಾಗುವಂತೆ ಸ್ಮಾರ್ಟ್ ಸಿಟಿ ಯೋಜನೆಯಡಿ ಸ್ಥಾಪಿಸಲಾಗಿರುವ ಸುಸಜ್ಜಿತ ಕಮಾಂಡ್ ಆಂಡ್ ಕಂಟ್ರೋಲ್ ಸೆಂಟರ್ ನಲ್ಲಿ ಎಂಸಿಸಿ ತಂಡ ಕಾರ್ಯನಿರ್ವಹಿಸುತ್ತಿದೆ ಎಂದು ಅಧಿಕಾರಿಗಳು ವಿವರಿಸಿದರು.

ಇಡೀ ಜಿಲ್ಲೆಯಾದ್ಯಂತ ಸ್ಥಾಪಿಸಲಾಗಿರುವ ಚೆಕ್ ಪೋಸ್ಟ್ ಗಳನ್ನು ವೆಬ್ ಕ್ಯಾಮೆರಾ ಮೂಲಕ ಒಂದೇ ಕಡೆ ಕುಳಿತು ನಿಗಾ ವಹಿಸುವ ವ್ಯವಸ್ಥೆ; ಜಿಪಿಎಸ್ ಆಧಾರಿತ ವಾಹನಗಳೊಂದಿಗೆ ಕ್ಷೇತ್ರದಾದ್ಯಂತ ಸಂಚರಿಸುವ ಎಫ್.ಎಸ್.ಟಿ. ತಂಡಗಳಿಗೆ ತಕ್ಷಣವೇ ಮಾಹಿತಿ ರವಾನಿಸಲು ಅನುಕೂಲವಾಗುವಂತಹ ಏಕೀಕೃತ ವ್ಯವಸ್ಥೆಯ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಲಾಯಿತು.

ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿಎಂಸಿ)ಕ್ಕೆ ಭೇಟಿ:ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಭವನದಲ್ಲಿ ಸ್ಥಾಪಿಸಲಾಗಿರುವ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿಎಂಸಿ)ಕ್ಕೆ ಭೇಟಿ ನೀಡಿದ ನಿಯೋಗದ ಸದಸ್ಯರು, ಪ್ರಮಾಣೀಕರಣ ಹಾಗೂ ನಿಗಾ ವ್ಯವಸ್ಥೆಯ ಕುರಿತು ಮಾಹಿತಿ ಪಡೆದುಕೊಂಡರು.

ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಕೇಂದ್ರ(ಎಂಸಿಎಂಸಿ)ದ ನೋಡಲ್ ಅಧಿಕಾರಿ ಹಾಗೂ ವಾರ್ತಾ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ ಕಾರ್ಯಚಟುವಟಿಕೆಗಳನ್ನು ವಿವರಿಸಿದರು.

ಸಾಮಾಜಿಕ ಜಾಲತಾಣಗಳ ನಿಗಾ; ಎ.ಐ. ನಿಂದ ಸೃಜಿಸಲಾಗುವ ಸುಳ್ಳುಸುದ್ದಿಗಳ ಪತ್ತೆ; ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳ ಚುನಾವಣಾ ವೆಚ್ಚದ ಮೇಲೆ ಯಾವ ರೀತಿ ನಿಗಾ ವಹಿಸುವ ವಿಧಾನಗಳು ಮತ್ತು ಕಾನೂನು ಕ್ರಮಗಳ ಬಗ್ಗೆ ನಿಯೋಗದ ಸದಸ್ಯರು ಚರ್ಚಿಸಿದರು.

6ನೇ ತರಗತಿ ಪ್ರವೇಶಕ್ಕೆ ಅರ್ಜಿ ಅಹ್ವಾನ

ಹೊಸಪೇಟೆ (ವಿಜಯನಗರ) ಮೇ 2024-25ನೇ ಸಾಲಿನ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಸಲಾಗಿದೆ.

ವಿದ್ಯಾರ್ಥಿಗಳು ಮೇ 9ರಿಂದ ɿttps://swdservices. karnataka.gov.in ಈ ವೆಬ್‌ಸೈಟ್ ಬಳಸಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ದಾಖಲಾತಿಗಳೊಂದಿಗೆ ಮೇ 21ರ ಸಂಜೆ 5.30ರೊಳಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನರ್ದೇಶಕರ ಕಚೇರಿಗೆ ಸಲ್ಲಿಸುವಂತೆ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಜಂಟಿ ನರ್ದೇಶಕರಾದ ಶ್ರೀ ಹೆಚ್.ವಿ. ಮಂಜುನಾಥ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.